**ದಿನಾಂಕಃ 22-02-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.**

ಪಾಟೀ ಸವಾಲುಃ 2 ನೇ ಎದುರುದಾರರ ರರ ಪರ ಶ್ರೀ ಪಿ. ಎಸ್. ಎಚ್. ವಕೀಲರಿಂದಃ

ಮೃತ ಲೋಕೇಶ ನನ್ನ ಪತಿ. ನಾನು ಹಾಗೂ ಉಳಿದ ಅರ್ಜಿದಾರರು ಮೃತ ಲೋಕೇಶನ ವಾರಸುದಾರರು ಎಂದು ತೋರಿಸಲು ವಾರಸಾ ಪ್ರಮಾಣ ಪತ್ರವನ್ನು ಹಾಜರುಪಡಿಸಲಾಗಿದೆ ಎಂದರೆ ಹಾಜರುಪಡಿಸಿರುತ್ತೇನೆ. ಅಪಘಾತದ ಕಾಲಕ್ಕೆ ನನ್ನ ಪತಿಯ ವಯಸ್ಸು 43 ವರ್ಷ ಆಗಿತ್ತು. ಈ ಸಂಬಂಧ ಅವರ ಜನನ ಪ್ರಮಾಣ ಪತ್ರವನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿ. ನನ್ನ ಪತಿ ಹೈನುಗಾರಿಕೆ ಹಾಗೂ ಕೃಷಿ ಮಾಡುತ್ತಿದ್ದು, ಮಾಸಿಕ ರೂ.40,000/- ಆದಾಯ ಹೊಂದಿದ್ದರು. ಈ ಸಂಬಂಧ ಯಾವುದೇ ದಾಖಲೆಗಳು ಇರುವುದಿಲ್ಲ. ನನ್ನ ಗಂಡ ಏನು ಕೆಲಸ ಮಾಡುತ್ತಿರಲಿಲ್ಲ ಹಾಗೂ ಅವರಿಗೆ ಯಾವುದೇ ಆದಾಯ ಇರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತದ ಕಾಲಕ್ಕೆ ನನ್ನ ಗಂಡ ದ್ವಿ ಚಕ್ರ ವಾಹನ ಚಲಾಯಿಸಲು ಚಾಲನಾ ಪರವಾನಿಗೆ ಪತ್ರ ಹೊಂದಿರಲಿಲ್ಲ ಎಂದರೆ ಸರಿ. ಅಪಘಾತ ಹೇಗೆ ಆಗಿರುತ್ತದೆ ಎಂದು ನನಗೆ ಮಾಹಿತಿ ಇದೆ. ನನ್ನ ಗಂಡನ ಅತೀ ವೇಗದ ಚಾಲನೆ ಹಾಗೂ ನಿರ್ಲಕ್ಷತನದಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಅಪಘಾತ ಕಾಲಕ್ಕೆ ನನ್ನ ಗಂಡೆ ಹೆಲ್ಮೆಟ್ ಧರಿಸಿರಲಿಲ್ಲ. ಲಾರಿ ಚಾಲಕನ ತಪ್ಪಿನಿಂದ ಅಪಘಾತವಾಗಿರುವುದಿಲ್ಲ ಎಂದರೆ ಸರಿಯಲ್ಲ. ಲಾರಿ ಚಾಲಕ ಡಿ.ಎಲ್ ಹೊಂದಿರುವ ಬಗ್ಗೆ ನನಗೆ ಮಾಹಿತಿ ಇಲ್ಲ.

2. ನನ್ನ ಗಂಡನ ಅಂತ್ಯ ಸಂಸ್ಕಾರಕ್ಕೆ ರೂ. 1,00,000/- ಖರ್ಚು ಮಾಡಿದ ಬಗ್ಗೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ ಎಂದರೆ ಸರಿ. ನನ್ನ ಗಂಡನ ನಿಷ್ಕಾಳಜಿತನದಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಅದರಿಂದ 2 ನೇ ಎದುರುದಾರರು ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

**1 ನೇ ಎದುರುದಾರ ಪರ ವಕೀಲರು ಗೈರು ಹಾಜರಾಗಿದ್ದು, ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ.

ದಿನಾಂಕಃ 22-02-2025.

Sd/-

ಹಿರಿಯ ಸಿ ಜೆ ಮತ್ತು ಜೆ. ಎಂ.ಎಫ್. ಸಿ

ಹಿರೇಕೆರೂರು